**ಪ್ರ ದ ನ್ಯಾ ದಂಡಾಧಿಕಾರಿಗಳ ನ್ಯಾಯಾಲಯ, ಕುಶಾಲನಗರ**

**ಸಿ ಸಿ ನಂಃ 1033/23**

ಸಾಕ್ಷಿಯ ಹೆಸರುಃ ನಿತಿನ್
ತಂದೆ /ಗಂಡನ ಹೆಸರು ಃ ದಿನೇಶ
ವಯಸ್ಸು ಃ **26**
ಉದ್ಯೋಗ ಃ ಕೂಲಿ ಕೆಲಸ
ವಾಸ ಸ್ಥಳ ಃ ಅರಿಶಿಣಗುಪ್ಪೆ ಗ್ರಾಮ , ಸೋಮವಾರಪೇಟೆ ತಾಲೂಕು

ಪ್ರಾಸಾ3
ಚಾಸಾ3

**ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಿ ಪ್ರಮಾಣೀಕರಿಸಿದ ದಿಃ 11.11.2024**

**ಮುಖ್ಯ ವಿಚಾರಣೆಃ ಎ ಪಿ ಪಿ ಯವರಿಂದ**

ನನಗೆ ಆರೋಪಿ ಪರಿಚಯ ಇರುವುದಿಲ್ಲ. ಈ ಕೇಸಿನ ಬಗ್ಗೆ ನನಗೇನು ಗೊತ್ತಿರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೆ ಪಂಚನಾಮೆಯನ್ನು ಜರುಗಿಸಿರುವುದಿಲ್ಲ ಮತ್ತು ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಯು ಮಹಜರನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ದೂರನ್ನು ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2 ಸಿ ಎಂದು, ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿಪಿ 4 ಎಂದು ಗುರುತಿಸಲಾಯಿತು. ನಿಪಿ- 2 ಕ್ಕೆ ಸುಮಾರು ಒಂದು ವರ್ಷದ ಹಿಂದೆ ನನ್ನ ಸ್ವಂತ ಕೆಲಸದ ನಿಮಿತ್ತ ಕುಶಾಲನಗರ ಪೊಲೀಸ್ ಠಾಣೆಗೆ ಹೋದಾಗ ಸಹಿ ಮಾಡಿರುತ್ತೇನೆ ಮತ್ತು ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ ಮತ್ತು ಪೊಲೀಸರು ಸಹ ಓದಿ ತಿಳಿಸಿರುವುದಿಲ್ಲ.

(ಸಾಕ್ಷಿಯು ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಕೋರಿರುತ್ತಾರೆ. ವಾದ ವಿವಾದ ಆಲಿಸಿದ್ದೇನೆ. ದಾಖಲೆಗಳನ್ನು ಪರಿಶೀಲಿಸಿದೆ. ಅನುಮತಿಸಿದೆ.)

ಪಾಟಿ ಸವಾಲುಃ ಮಾನ್ಯ ಎಪಿಪಿ ಯವರಿಂದ

ದಿಃ **26.06.2023** ರಂದು ಸಂಜೆ **5.20** ಕ್ಕೆ ನಾನು ಮತ್ತು ಚಾಸಾ **2** ರವರು ಸಿದ್ದಲಿಂಗಪುರ ಗ್ರಾಮದ ಕಡೆಯಿುಂದ ಬಸರಿಗುಪ್ಪೆ ಗ್ರಾಮದ ಕಡೆಗೆ ಹೋಗುವ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ , ಪೋಲಿಸರು ಈ ಪ್ರಕರಣದ ವಿಚಾರ ತಿಳಿಸಿ ಮಹಜರಗೆ ಸಹಕರಿಸುವಂತೆ ಕೇ ಳಿಕೊಂಡಿದ್ದು ಅದಕ್ಕೆ ನಾವು ಒಪ್ಪಿದ ಮೇರೆಗೆ ನಮ್ಮ ಸಮಕ್ಷಮ ಮಹಜರ ಕ್ರಮ ಜರುಗಿಸಿದ್ದು ಪ್ರಾಸಾ **1** ರವರು ತೋರಿಸಿಕೊಟ್ಟ ಕಲ್ಲನ್ನು ನಮ್ಮ ಸಮಕ್ಷಮ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮಹಜರನ್ನು ಸಂಜೆ **5.30** ರಿಂದ **6.45** ಗಂಟೆ ಯವರೆಗೆ ತಯಾರಿಸಲಾಗಿದೆ ಎಂದರೆ ಸರಿಯಲ್ಲ. ಈಗ ಓದಿ ಕೇಳಿಸಿಕೊಂಡ ನಿಪಿ**-3** ರಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

ಆರೋಪಿಯೊಂದಿಗೆ ರಾಜಿಯಾಗಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಇಲ್ಲ

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.)

ಓದಿ ಹೇಳಿ ಕೇಳಿ ಸರಿ ಇದೆ.

ಸಹಿ/-

ಪ್ರ ದ ನ್ಯಾ ದಂ, ಕುಶಾಲನಗರ.